# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1385(1484) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ವೈ.ಎಂ.ಸತೀಶ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 17.03.2026 |
| ಉತ್ತರಿಸುವ ಸಚಿವರು | : | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬಳ್ಳಾರಿ ಜಿಲ್ಲೆಯಲ್ಲಿ ಜೀನ್ಸ್ ಟೆಕ್ಸ್‌ಟೈಲ್ಸ್ ಪಾರ್ಕ್ ಸ್ಥಾಪನೆ ಮಾಡಲಾಗುತ್ತಿದೆಯೇ; ಇದ್ದಲ್ಲಿ ಈ ಕಾಮಗಾರಿ ಯಾವ ಹಂತದಲ್ಲಿದೆ; ಇದರ ಅನುಕೂಲಗಳೇನು ಇದರ ಕುರಿತಾಗಿ ನಡೆದಿರುವ ಕೆಲಸಗಳೇನು; ಮಾಹಿತಿ ಒದಗಿಸುವುದು; | ಬಳ್ಳಾರಿ ಜಿಲ್ಲೆ ಮತ್ತು ತಾಲ್ಲೂಕಿನಲ್ಲಿ ಸಂಜೀವರಾಯನ ಕೋಟೆ ಕೈಗಾರಿಕಾ ಪ್ರದೇಶ ಜೀನ್ಸ್/ಟೆಕ್ಸ್‌ಟೈಲ್ಸ್ ಪಾರ್ಕನ್ನು ಮೊದಲನೇ ಹಂತದಲ್ಲಿ 154.58 ಎಕರೆ ಮತ್ತು 2ನೇ ಹಂತದಲ್ಲಿ 492.39 ಎಕರೆ ಒಟ್ಟು ಸುಮಾರು 646.97 ಎಕರೆ ಪ್ರದೇಶವನ್ನು ಅಭಿವೃದ್ಧಿಪಡಿಸಲು ಭೂಸ್ವಾಧೀನಪಡಿಸಿ ಕೊಳ್ಳಲಾಗಿರುತ್ತದೆ.<br><br>ಸಂಜೀವರಾಯನ ಕೋಟೆ 1ನೇ ಹಂತದ ಕೈಗಾರಿಕಾ ಪ್ರದೇಶದ ಅಭಿವೃದ್ಧಿ ಕಾಮಗಾರಿಯು ಮುಕ್ತಾಯದ ಹಂತದಲ್ಲಿರುತ್ತದೆ.<br><br>ಸಂಜೀವರಾಯನ ಕೋಟೆ ಕೈಗಾರಿಕಾ ಪ್ರದೇಶದ ಜೀನ್ಸ್/ಟೆಕ್ಸ್‌ಟೈಲ್ಸ್ ಪಾರ್ಕ್ ನಲ್ಲಿ Common Facility Centre (CFC) ಕಾಮಗಾರಿಯನ್ನು ಅಭಿವೃದ್ಧಿ ಪಡಿಸಲಾಗುತ್ತಿದ್ದು, ಕಾಮಗಾರಿಯು ಪ್ರಗತಿಯಲ್ಲಿರುತ್ತದೆ. |
| ಆ) | ಈ ಜೀನ್ಸ್ ಟೆಕ್ಸ್‌ಟೈಲ್ಸ್ ಪಾರ್ಕ್ ಸ್ಥಾಪನೆಗೆ ಸ್ಥಳದ ಗುರುತಿಸುವಿಕೆ ಕೈಗೊಳ್ಳಲಾಗಿದೆಯೇ; ಇದ್ದಲ್ಲಿ ಯಾವ ಪ್ರದೇಶದಲ್ಲಿ ಗುರುತಿಸಲಾಗಿದೆ; ಅದರ ಅನುಕೂಲಗಳೇನು; | ಈ ಪ್ರದೇಶವು ಬಳ್ಳಾರಿ ನಗರಕ್ಕೆ ಸಮೀಪವಿರುವುದರಿಂದ ಜೀನ್ಸ್/ಟೆಕ್ಸ್‌ಟೈಲ್ಸ್ ಪಾರ್ಕ್ ಸ್ಥಾಪಿಸಲು ಸೂಕ್ತವಾಗಿರುತ್ತದೆ. |
| ಇ) | ಬಳ್ಳಾರಿ ಜಿಲ್ಲೆಯ ಈ ಜೀನ್ಸ್ ಟೆಕ್ಸ್‌ಟೈಲ್ಸ್ ಪಾರ್ಕ್ ಸ್ಥಾಪನೆಯನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು; ಇಲ್ಲಿಯವರೆಗೂ ಇದರ ಕುರಿತಾಗಿ ನಡೆದಿರುವ ಪ್ರಕ್ರಿಯೆಗಳೇನು; ದಾಖಲೆಗಳೊಂದಿಗೆ ಮಾಹಿತಿ ಒದಗಿಸುವುದು? | ಜೀನ್ಸ್/ಟೆಕ್ಸ್‌ಟೈಲ್ಸ್ ಪಾರ್ಕ್ ಸ್ಥಾಪನೆಗಾಗಿ ನಡೆದಿರುವ ಕಾಮಗಾರಿಯು ಮಾರ್ಚ್-2026ರ ಅಂತ್ಯದೊಳಗೆ ಪೂರ್ಣಗೊಳ್ಳುವ ನಿರೀಕ್ಷೆಯಿದೆ. ಸದರಿ ಕೈಗಾರಿಕಾ ಪ್ರದೇಶದ ನಿವೇಶನಗಳನ್ನು ಹಂಚಿಕೆ ಮಾಡಲು ಅಧಿಸೂಚನೆಯನ್ನು ಹೊರಡಿಸಲಾಗಿದ್ದು, ಅರ್ಜಿಗಳನ್ನು ಸ್ವೀಕರಿಸಲಾಗುತ್ತಿದೆ. |

**ಸಿಐ 187 ಐಎಪಿ 2026**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು